**ಓ ಎಸ್ ನಂಃ 236/2022** **ಪಿ ಡಬ್ಲ್ಯೂ - 1**

**ಸಾಕ್ಷಿಯನ್ನು ದಿನಾಂಕಃ 11.03.2025 ರಂದು ಪುನಃ ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ** 12 ನೇ ಪ್ರತಿವಾದಿಯ ಪರ ಶ್ರೀ ವಿ ಆರ್ ಜಿ ವಕೀಲರಿಂದ

12 ನೇ ಪ್ರತಿವಾದಿಯು 1 ನೇ ಐಟಂ ಆಸ್ತಿಯನ್ನು ನನ್ನ ತಮ್ಮನಿಂದ ಖರೀದಿ ಮಾಡಿರುತ್ತಾರೆ. ನನ್ನ ತಮ್ಮನ ಹೊರತಾಗಿ ಬೇರೆಯವರು ಯಾರೂ ಖರೀದಿ ಪತ್ರಕ್ಕೆ ಸಹಿ ಮಾಡಿದ್ದಾರೆ ಎಂದು ಗೊತ್ತಿಲ್ಲ. 12 ನೇ ಪ್ರತಿವಾದಿಯು 1 ನೇ ಐಟಂ ಆಸ್ತಿಯನ್ನು 11 ನೇ ಪ್ರತಿವಾದಿಯಿಂದ ಖರೀದಿ ಮಾಡಿದ್ದಾರೆ ಎಂದರೆ ಸರಿ. 2 ನೇ ಪ್ರತಿವಾದಿಯ ಹೆಸರಿನಲ್ಲಿ ಉಳಿದ ದಾವಾ ಆಸ್ತಿಗಳು ಇವೆ ಎಂದರೆ ಸರಿ. 2 ನೇ ಪ್ರತಿವಾದಿ ತನ್ನ ಹಿಸ್ಸೆಯನ್ನು ಮಾರಾಟ ಮಾಡಿರುವುದಕ್ಕೆ ನನ್ನ ತಕರಾರು ಇದೆ. 1 ನೇ ಪ್ರತಿವಾದಿಗೆ ಮೋಸ ಮಾಡಿ 2 ನೇ ಪ್ರತಿವಾದಿಯು ದಾವಾ ಆಸ್ತಿಯ ಕಂದಾಯ ದಾಖಲೆಗಳಲ್ಲಿ ತನ್ನ ಹೆಸರನ್ನು ನಮೂದಿಸಿಕೊಂಡಿದ್ದಾನೆ. 5 ನೇ ಪ್ರತಿವಾದಿಯ ಗಂಡನ ಹೆಸರು ಸಹ ಕೆಲವು ಕಂದಾಯ ದಾಖಲೆಗಳಲ್ಲಿ ಇವೆ. ದಾವಾ ಆಸ್ತಿಗಳಲ್ಲಿ ನಮ್ಮ ಪಾಲನ್ನು ನಮಗೆ ಕೊಟ್ಟ ನಂತರ 2 ನೇ ಪ್ರತಿವಾದಿಯು ತನ್ನ ಪಾಲನ್ನು ಮಾರಾಟ ಮಾಡಲು ನನ್ನ ತಕರಾರು ಇಲ್ಲ. ಕಾನೂನಾತ್ಮಕವಾಗಿ ಸರಿಯಾದ ಕಿಮ್ಮತ್ತನ್ನು ನೀಡಿ 12 ನೇ ಪ್ರತಿವಾದಿಯು 1 ನೇ ಐಟಂ ಆಸ್ತಿಯನ್ನು 11 ನೇ ಪ್ರತಿವಾದಿಯಿಂದ ಖರೀದಿ ಮಾಡಿದ್ದಾರೆ ಎಂದರೆ ಗೊತ್ತಿಲ್ಲ. 12 ಮತ್ತು 2 ನೇ ಪ್ರತಿವಾದಿಗಳಿಗೂ ಹಾಗೂ ಉಳಿದ ವಾದಿ ಮತ್ತು ಪ್ರತಿವಾದಿಗಳಿಗೆ ಯಾವುದೇ ಸಂಬಂಧವಿಲ್ಲ ಎಂದರೆ ಸರಿಯಲ್ಲ.

1 ನೇ ಐಟಂ ಆಸ್ತಿಯನ್ನು ಹೊರತುಪಡಿಸಿ ಉಳಿದ ಆಸ್ತಿಗಳಲ್ಲಿ ವಿಭಾಗ ಮಾಡಿಕೊಳ್ಳಲು ನಮಗೆ ಯಾವುದೇ ತೊಂದರೆ ಇಲ್ಲ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು 1 ನೇ ಐಟಂ ಆಸ್ತಿಯಲ್ಲಿ ಸಹ ಇನ್ನೂ ವಿಭಾಗವಾಗಿಲ್ಲ ಎಂದು ನುಡಿಯುತ್ತಾರೆ. 10 ನೇ ಪ್ರತಿವಾದಿ ಯಾರು ಎಂದು ಗೊತ್ತಿಲ್ಲ. 1 ನೇ ಐಟಂ ಆಸ್ತಿಯನ್ನು ಹೊರತುಪಡಿಸಿ ಉಳಿದ ಆಸ್ತಿಗಳಲ್ಲಿ ವಿಭಾಗ ಮಾಡಿಕೊಳ್ಳಲು ಅವಕಾಶ ಇದ್ದರೂ ಸಹ 12 ನೇ ಪ್ರತಿವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆ ಹೂಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**11 ನೇ ಪ್ರತಿವಾದಿ ಮತ್ತು ಅವರ ಪರ ವಕೀಲರು ಗೈರು ಹಾಜರುಇರುವುದರಿಂದ ಹಾಗೂ ಪ್ರತಿವಾದ ಪತ್ರವನ್ನು ಸಲ್ಲಿಸದೇ ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

**ಓ ಹೇ ಕೆ ಸರಿ ಇದೆ,**

**ದಿವಾಣಿ ನ್ಯಾಯಾಧೀಶರು ಹಾಗೂ**

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ.**